ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521
ಕಂಪನಿ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು 560 009

**ಸಂಖ್ಯೆ: ಕವಿಪ್ರನಿನಿ/ಬಿ5/9634/2020-21** **ದಿನಾಂಕ:** 08 JUN 2020

## ಸುತ್ತೋಲೆ

**ವಿಷಯ:** ಕೋವಿಡ್ – 19 ಸಾಂಕ್ರಾಮಿಕ ರೋಗವು ಹರಡದಂತೆ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ.

---

ಕಾವೇರಿ ಭವನದ ಆಡಳಿತ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಲವು ಅಧಿಕಾರಿಗಳು ಮತ್ತು ನೌಕರರು ನಿಗಮದ ಕೆಲಸದ ದಿನಗಳಲ್ಲಿ ಕಛೇರಿಯ ಕೆಲಸದ ಅವಧಿಯಲ್ಲಿ ಮತ್ತು ಭೋಜನ ವಿರಾಮದ ವೇಳೆಯಲ್ಲಿಯೂ ಸಹ ಅನಾವಶ್ಯಕವಾಗಿ ಕಾವೇರಿ ಭವನದಿಂದ ಹೊರಗೆ ಓಡಾಡುತ್ತಿರುವುದು ಗಮನಕ್ಕೆ ಬಂದಿರುತ್ತದೆ. ಆದರೆ, ಬೆಂಗಳೂರು ನಗರದಾದ್ಯಂತ ಕೋವಿಡ್-19 ಸಾಂಕ್ರಾಮಿಕ ರೋಗವು ತೀವ್ರಗತಿಯಲ್ಲಿ ಹರಡುತ್ತಿರುವುದು ತಿಳಿದಿರುವ ವಿಷಯವಾಗಿರುತ್ತದೆ. ಆದ್ದರಿಂದ, ಅಧಿಕಾರಿಗಳು ಮತ್ತು ನೌಕರರು ಕಛೇರಿಯ ಕೆಲಸಕ್ಕೆ ಹಾಜರಾದ ನಂತರ ಕಛೇರಿ ಕೆಲಸದ ಅವಧಿಯಲ್ಲಿ ಕಾವೇರಿ ಭವನದಿಂದ ಅನಾವಶ್ಯಕವಾಗಿ ಮತ್ತು ಸೂಕ್ತ ಕಾರಣಗಳಿಲ್ಲದೇ ಹೊರಗೆ ಹೋಗುವುದನ್ನು ನಿಗಮವು ಬಹಳ ಗಂಭೀರವಾಗಿ ಪರಿಗಣಿಸಿದೆ. ಆದ್ದರಿಂದ, ಕಛೇರಿ ಕೆಲಸದ ಸಮಯದಲ್ಲಿ ಅಧಿಕಾರಿಗಳು ಮತ್ತು ನೌಕರರು ಕಾವೇರಿ ಭವನದಿಂದ ಹೊರಗೆ ಹೋಗದಂತೆ ಸೂಚಿಸಲಾಗಿದೆ. ಆದರೂ ಸಹ, ಅಧಿಕಾರಿಗಳು ಮತ್ತು ನೌಕರರು ತುರ್ತು ಕಾರ್ಯಗಳ ನಿಮಿತ್ತ, ಕಾವೇರಿ ಭವನದಿಂದ ಹೊರಗೆ ಹೋಗಲೇಬೇಕಾಗಿ ಬಂದಲ್ಲಿ, ಕಾವೇರಿ ಭವನದ ಮುಖ್ಯ ದ್ವಾರದಲ್ಲಿ ಇರಿಸಿದ ಚಲನವಲನ ಪುಸ್ತಕದಲ್ಲಿ ಹೊರಗೆ ಹೋಗಲು ಇರುವ ಕಾರಣಗಳನ್ನು ಮತ್ತು ಸಮಯವನ್ನು ಕಡ್ಡಾಯವಾಗಿ ದಾಖಲಿಸಲು ಸೂಚಿಸಿದೆ. ಈ ಸೂಚನೆಗಳನ್ನು ಪಾಲಿಸದ ಅಧಿಕಾರಿಗಳ ಮತ್ತು ನೌಕರರ ವಿರುದ್ಧ ಸೂಕ್ತ ಶಿಸ್ತು ಕ್ರಮಗಳನ್ನು ಜರುಗಿಸಲಾಗುವುದು.

ಅಧಿಕಾರಿಗಳು ಮತ್ತು ನೌಕರರು ಮೇಲಿನ ಸೂಚನೆಗಳನ್ನು ಪಾಲಿಸುವ ಬಗ್ಗೆ ಕಾವೇರಿ ಭವನದ ಭದ್ರತಾ ಸಿಬ್ಬಂದಿಯು ತಪ್ಪದೇ ಖಚಿತ ಪಡಿಸಿಕೊಳ್ಳತಕ್ಕದ್ದು.

ಮುಂದುವರೆದು, ಈಗಾಗಲೇ ಹಲವು ಸೂಚನೆಗಳನ್ನು ನೀಡಿದ್ದರೂ ಸಹ, ಕಾವೇರಿ ಭವನದ ಆಡಳಿತ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಲವು ನೌಕರರು ಕಛೇರಿಯ ಕೆಲಸದ ಅವಧಿಯಲ್ಲಿ ಸಮವಸ್ತ್ರವನ್ನು ಧರಿಸದೇ ಕಾರ್ಯನಿರ್ವಹಿಸುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿದೆ. ಆದ್ದರಿಂದ, ಕಛೇರಿಯ ಕೆಲಸದ ಅವಧಿಯಲ್ಲಿ ಸಮವಸ್ತ್ರವನ್ನು ಧರಿಸದೇ ಕಾರ್ಯನಿರ್ವಹಿಸುವ ಸಿಬ್ಬಂದಿಯ ವಿರುದ್ಧ ಸಂಬಂಧಿಸಿದ ಕಛೇರಿಗಳ ಮುಖ್ಯಸ್ಥರು ಸೂಕ್ತ ಶಿಸ್ತು ಕ್ರಮವನ್ನು ಜರುಗಿಸಲು ಸೂಚಿಸಿದೆ.

'ವ್ಯವಸ್ಥಾಪಕ ನಿರ್ದೇಶಕರಿಂದ
ಅನುಮೋದಿಸಲ್ಪಟ್ಟಿದೆ'

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ.),**
**ಕವಿಪ್ರನಿನಿ.**

ಪ್ರತಿಗಳು:

1. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆ. ಮತ್ತು ಮಾ.ಸಂ.) ಮತ್ತು ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com-->eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

4. ಎಲ್ಲಾ ಅಧೀಕ್ಷಕ ಇಂಜಿನಿಯರ್ / ಎಲ್ಲಾ ನಿಯಂತ್ರಣಾಧಿಕಾರಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
5. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಎಲ್ಲಾ ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
6. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ.), ಕವಿಪ್ರನಿನಿ.
7. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಗಳು ಮಾಹಿತಿಗಾಗಿ:

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ & ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.